ಕ್ರ ಸಂ	ವಾರ್ಡ್ ಸಂಖ್ಯೆ	ವಾರ್ಡ್ ಹೆಸರು	ಕಾವೇರಿ ನೀರಿನ ಸಂಪರ್ಕಗಳ ಸಂಖ್ಯೆ	ಹಾಲಿ ಇರುವ ಕೊಳವೆ ಬಾವಿಗಳ ಸಂಖ್ಯೆ	ಕೊಳವೆ ಬಾವಿ ನೀರಿನ ಸಂಪರ್ಕಗಳ ಸಂಖ್ಯೆ
1	1	ಕೆಂಪೇಗೌಡ	220	65	1500
2	2	ಚೌಡೇಶ್ವರಿ	488	54	900
3	3	ಅಟ್ಟೂರು	1555	67	3300
4	4	ಯಲಹಂಕ ಉಪನಗರ	3842	87	4010
		ಒಟ್ಟು	**6105**	**273**	**9710**

ಇ) ಬೆಂಗಳೂರು ಜಲಮಂಡಳಿಯ ಕಾವೇರಿ 4ನೇ ಹಂತ 2ನೇ ಘಟ್ಟ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ಬೆಂಗಳೂರು ನಗರಕ್ಕೆ ಹೆಚ್ಚುವರಿಯಾಗಿ 500 ದಶಲಕ್ಷ ಲೀಟರ್ ನೀರನ್ನು ತರುವ ಕಾರ್ಯವು ಪ್ರಗತಿಯಲ್ಲಿದ್ದು ಬರುವ ಮಾರ್ಚ್2012ರಲ್ಲಿ ಮುಗಿಯುವ ಹಂತದಲ್ಲಿದೆ. ಆ ನಂತರ ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದು.

ಕ್ರೀಡಾಂಗಣಗಳ ಮಂಜೂರಾತಿ

71 (182) ಶ್ರೀ ವಿಶ್ವನಾಥ್ ಎಸ್.ಆರ್.(ಯಲಹಂಕ):– ಮಾನ್ಯ ಪ್ರವಾಸೋದ್ಯಮ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಯಲಹಂಕ ವಿಧಾನ ಸಭಾ ಕ್ಷೇತ್ರವು ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಹೊಂದಿಕೊಂಡಿದ್ದು ಇಲ್ಲಿ ಕ್ರೀಡಾಂಗಣಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಲಹಂಕ ವಿಧಾನ ಸಭಾ ಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಕ್ರೀಡಾಂಗಣಗಳು ಮಂಜೂರಾಗಿದೆ;

ಇ) ಹಾಗಿಲ್ಲದಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು;

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಇಲ್ಲ.

ಆ) ಪ್ರಸ್ತಾವನೆ ಬಂದಿರುವುದಿಲ್ಲ.

ಇ) ಪ್ರಸ್ತಾವನೆ ಬಂದಿರುವುದಿಲ್ಲ.

ಪತ್ರಿಕಾ ಭವನ ಪ್ರಾರಂಭಿಸುವುದು

72 (183) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ ಕ್ಷೇತ್ರ):– ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಯಲಹಂಕ ವಿಧಾನಸಭೆ ಕ್ಷೇತ್ರದ ಕೇಂದ್ರ ಸ್ಥಾನವಾದ ಯಲಹಂಕದಲ್ಲಿ ಪತ್ರಿಕಾಭವನ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಪತ್ರಿಕಾ ಭವನವನ್ನು ಪ್ರಾರಂಭಿಸುವುದರಿಂದ ಪತ್ರಿಕೋದ್ಯಮಕ್ಕೆ ಪ್ರೋತ್ಸಾಹ ನೀಡಿದಂತಾಗುವುದರಿಂದ, ಸದರಿ ಯೋಜನೆ ಸಾಕಾರಗೊಳ್ಳಲು ಸರ್ಕಾರ ಹಾಕಿಕೊಂಡಿರುವ ಯೋಜನೆ ವಿವರ ನೀಡುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಯವರು):

ಅ) ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಅನುಬಂಧ–III

ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2011

(ವಿಧಾನಸಭೆಯ ವಿಧೇಯಕ ಸಂಖ್ಯೆ 30)

2011–12ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ವಿಧೇಯಕ.

2011–12ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ **ಅರವತ್ತೆರಡನೇ** ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ,

1. ಸಂಕ್ಷಿಪ್ತ ಹೆಸರು:– ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ಅಧಿನಿಯಮ 2011 ಎಂದು ಕರೆಯತಕ್ಕದ್ದು.